**ದಿನಾಂಕ: 19.03.2022 ರಂದು ವಾರ್ಡ್ ಸಂಖ್ಯೆ 184 ಉತ್ತರಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು:-**

7. ಶ್ರೀ ಡಿ.ಸುಂದರಯ್ಯ- ವಾರ್ಡ್ ಸಮಿತಿ ನೋಡಲ್ ಅಧಿಕಾರಿ
8. ಶ್ರೀ ವೆಂಕಟರಮಣ.ಕೆ.ವಿ -ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 184ಉತ್ತರಹಳ್ಳಿ)
9. ಶ್ರೀಮತಿ ಮೇಘಶ್ರೀ.ವಿ - ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ
10. ಶ್ರೀ ಮಂಜುನಾಥ್- ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ
11. ಶ್ರೀ ರವೀಂದ್ರ
12. ಶ್ರೀಮತಿ ಸುಧಾ- ಪಿ.ಹೆಚ್.ಸಿ ಉತ್ತರಹಳ್ಳಿ
13. ಶ್ರೀಮತಿ ಹೇಮಲತಾ
14. ಶ್ರೀ ಸಿದ್ದರಾಜು-ಬೀದಿ ದೀಪ ನಿರ್ವಹಣೆ

**ಹಾಜರಿದ್ದ ಸಮಿತಿ ಸದಸ್ಯರು:-**

3. ಶ್ರೀ ಶ್ರೀನಾಥ್ - ಪೂರ್ಣಪ್ರಜ್ಞಾ ಬಡಾವಣೆ RWA
4. ಶ್ರೀ ವಿಜಯ್ ಬಾಬು.ಬಿ - ಪೂರ್ಣಪ್ರಜ್ಞಾ ಬಡಾವಣೆ RWA
5. ಶ್ರೀ ಅರುಣ್ - ಎ.ಜಿ.ಎಸ್ ಬಡಾವಣೆ RWA
6. ಶ್ರೀ ಅಮರ್.ಎಂ.ಆರ್ - ಎ.ಜಿ.ಎಸ್ ಬಡಾವಣೆ RWA

ಮೇಲೆ ಹಾಜರಿದ್ದ ಸಮಿತಿ ಸದಸ್ಯರ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ವಾರ್ಡ್ ಸಮಿತಿ ನೋಡಲ್ ಅಧಿಕಾರಿಯಾದ ಶ್ರೀ ಡಿ.ಸುಂದರಯ್ಯ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು, ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ವಿವಿಧ ವಿಷಯಗಳ ಬಗ್ಗೆ ವಾರ್ಡ್ ಸಮಿತಿಯು ವಿವರವಾಗಿ ಚರ್ಚಿಸಿದಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿ / ಇಲಾಖೆಗಳಿಗೆ ಸೂಚಿಸಲಾಗಿರುತ್ತದೆ.

1 <u>ಕೋವಿಡ್-19ಗೆ ಸಂಬಂಧಪಟ್ಟಂತೆ ಡಾ// ಸುಧಾ, ಪಿ.ಹೆಚ್.ಸಿ ಉತ್ತರಹಳ್ಳಿ ರವರು ಈ ಕೆಳಕಂಡಂತೆ ವಿವರ ನೀಡಿರುತ್ತಾರೆ.</u>

➢ 184 ವಾರ್ಡಿನ ಪ್ರಜೆಗಳಿಗೆ ಬೂಸ್ಟರ್ ಡೋಸ್ ವ್ಯಾಕ್ಸಿನ್ ಅನ್ನು ನೀಡಲು ಕೋರಿರುತ್ತಾರೆ. ಹಾಗೂ ವ್ಯಾಕ್ಸಿನ್ ಕ್ಯಾಂಪ್ ಗಳನ್ನು ಅಳವಡಿಸಲು ಕೋರಿರುತ್ತಾರೆ.

2. <u>ಬೀದಿ ದೀಪಗಳಿಗೆ ಸಂಬಂಧಪಟ್ಟಂತೆ</u>

➢ 80 ಅಡಿ ರಸ್ತೆಯಲ್ಲಿರುವ ಕಂಬಗಳಲ್ಲಿ ಟೈಮರ್ ಹಾಳಾಗಿದ್ದು, ಸರಿ ಪಡಿಸಲು ಕೋರಿರುತ್ತಾರೆ.

➢ ಎ.ಜಿ.ಎಸ್ ಬಡಾವಣೆಯಲ್ಲಿ ಹಾಳಾಗಿರುವ ವಿದ್ಯುತ್ ದೀಪಗಳನ್ನು ಸರಿಪಡಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಬೀದಿ ದೀಪ ರವರಿಗೆ ಸೂಚಿಸಿರುತ್ತಾರೆ.

ಪು.ತಿ.ನೋ

Scanned with CamScanner

**3. ಬೆಸ್ಕಾಂ ಇಲಾಖೆಗೆ ಸಂಬಂಧಪಟ್ಟಂತೆ.**

- ಪೂರ್ಣ ಪ್ರಜ್ಞಾ ಬಡಾವಣೆಯಲ್ಲಿ ಎ.ಬಿ.ಸಿ ವಿದ್ಯುತ್ ಕೇಬಲನ್ನು ಅಳವಡಿಸುವ ಕೆಲಸ ಬಾಕಿಯಿದ್ದು, ಈ ಕೂಡಲೇ ಕೆಲಸವನ್ನು ಪೂರ್ಣಗೊಳಿಸಲು ಕೋರಿರುತ್ತಾರೆ.
- ಎ.ಜಿ.ಎಸ್ ಬಡಾವಣೆಯ 13ನೇ ಮುಖ್ಯರಸ್ತೆಯಲ್ಲಿರುವ ಬಸ್ ನಿಲ್ದಾಣದಲ್ಲಿ ವಿದ್ಯುತ್ ಕಂಬವನ್ನು ಅಳವಡಿಸಲು ಕೋರಿರುತ್ತಾರೆ.
- ಎ.ಜಿ.ಎಸ್ ಬಡಾವಣೆ 10ನೇ ಮುಖ್ಯರಸ್ತೆಯಲ್ಲಿ ತೆರವುಗೊಳಿಸಿರುವ ವಿದ್ಯುತ್ ಕಂಬವನ್ನು ರಸ್ತೆಯ ಬದಿಯಲ್ಲೇ ಇಟ್ಟಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಕೂಡಲೇ ಆ ವಿದ್ಯುತ್ ಕಂಬವನ್ನು ಸ್ಥಳದಿಂದ ತೆರವುಗೊಳಿಸಲು ಕೋರಿರುತ್ತಾರೆ.
- ಎ.ಜಿ.ಎಸ್ ಬಡಾವಣೆಯ ವಿದ್ಯುತ್ ಏರಿಳಿತ ಸಮಸ್ಯೆಯನ್ನು ಈ ಕೂಡಲೇ ಬಗೆಹರಿಸಲು ಕೋರಿರುತ್ತಾರೆ.

**4. ಸ.ಕಾ.ನಿ.ಅ ಉತ್ತರಹಳ್ಳಿ ಉಪವಿಭಾಗಕ್ಕೆ ಸಂಬಂಧಪಟ್ಟಂತೆ**

- ಎ.ಜಿ.ಎಸ್ ಬಡಾವಣೆಯ 3ನೇ ಮುಖ್ಯರಸ್ತೆಯಲ್ಲಿ ಅನಧಿಕೃತವಾಗಿ ಟೆಲಿಕಾಂ ಟವರ್ ಅಳವಡಿಸಿದ್ದು, ತೆರವುಗೊಳಿಸಲು ಕೋರಿರುರತ್ತಾರೆ.
- ಎ.ಜಿ.ಎಸ್ ಬಡಾವಣೆಯ 16ನೇ ಮುಖ್ಯರಸ್ತೆಯಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ಅಳವಡಿಸಲು ಕೋರಿರುತ್ತಾರೆ.
- ಎ.ಜಿ.ಎಸ್ ಬಡಾವಣೆಯ 16ನೇ ಮುಖ್ಯರಸ್ತೆಯಲ್ಲಿ ಒಳಚರಂಡಿಗಾಗಿ ಅಗೆದಿರುವ ರಸ್ತೆಯನ್ನು ಡಾಂಬರೀಕರಣ ಮಾಡಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ಹಾಗೂ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯ ವಿಲೇವಾರಿ ಮತ್ತು ನಿರ್ವಹಣೆ ರವರಿಗೆ ಸೂಚಿಸಿರುತ್ತಾರೆ.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಸುಂದರಯ್ಯ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

'ಸಹಿ'
ಶ್ರೀ ಡಿ.ಸುಂದರಯ್ಯ
ನೋಡಲ್ ಅಧಿಕಾರಿ ಹಾಗೂ ಸ.ಕಾ.ನಿ.ಅ
ಆಂಜನಾಪುರ ಉಪವಿಭಾಗ

ಶ್ರೀ ವೆಂಕಟರಮಣ.ಕೆ.ವಿ
ಸಂಚಾಲಕರು ಹಾಗೂ ಸ.ಅ–184

Scanned with CamScanner